157ನೆ (125) LRR

# ಕರ್ನಾಟಕ ವಿಧಾನ ಪರಿಷತ್ತು

## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಡಾ. ಉಮಾಶ್ರೀ ಇವರ ನಿಯಮ-72 ರಡಿಯಲ್ಲಿ ಗಮನ ಸೆಳೆಯುವ ಸೂಚನೆಗೆ ಉತ್ತರ.

**ನಿಯಮ-72 ರಡಿಯಲ್ಲಿ ಗಮನ ಸೆಳೆಯುವ ಸೂಚನೆ:-**

ಉತ್ತರ ಭಾರತದಿಂದ ವಲಸೆ ಬರುತ್ತಿರುವ ಕಾರ್ಮಿಕರು ನಗರ ಮಾತ್ರವಲ್ಲದೇ ಗ್ರಾಮೀಣ ಪ್ರದೇಶದಲ್ಲೂ ಬೀಡು ಬಿಡುತ್ತಿರುವುದು ಹೊಸ ಸಾಮಾಜಿಕ ಸಮಸ್ಯೆ ಸೃಷ್ಠಿಗೆ ಕಾರಣವಾಗಿದೆ. ಈ ಪರಿಹಾರ ವಿವಿದೆಡೆ ಸ್ಥಳೀಯರಿಂದ ಬದುಕಿಗಾಗಿ ಹೋರಾಟ ರೂಪುಗೊಳ್ಳುತ್ತಿದೆ ಹಾಗೂ ಈ ವಲಸಿಗ ಕಾರ್ಮಿಕರಿಂದ ನೇಕಾರ ಕೂಲಿ ಕಾರ್ಮಿಕರಿಗೆ, ನೇಯ್ಗೆ ಹಾಗೂ ಇತರೆ ಕಾರ್ಮಿಕರಿಗೆ ಬಹುದೊಡ್ಡ ಅನ್ಯಾಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಈ ಕಾರ್ಮಿಕರಿಗೆ ನ್ಯಾಯ ಒದಗಿಸುವಲ್ಲಿ ಸರ್ಕಾರ ಯಾವುದೇ ಕ್ರಮಕ್ಕೈಗೊಂಡಿರುವುದಿಲ್ಲ. ರಾಜ್ಯದಲ್ಲಿ ಈ ವಲಸಿಗರಿಗೆ ವಸತಿ, ದಿನಸಿ ಕೊಟ್ಟು ರೂ.350, ರೂ.400 ಗೆ ಮಾಡಿಸುತ್ತಿದ್ದಾರೆ. ಹೀಗಾದಲ್ಲಿ ರಾಜ್ಯದ ಕಾರ್ಮಿಕರು ಕೆಲಸ ಕಳೆದುಕೊಳ್ಳುವ ಪರಿಸ್ಥಿತಿ ಉಂಟಾಗುತ್ತಿದೆ. ಇದರಿಂದ ಕಾರ್ಮಿಕರು ಬದುಕುವುದೇ ಕಷ್ಟವಾಗಲಿದೆ. ಈ ಬಗ್ಗೆ ರಾಜ್ಯದ ಕಾರ್ಮಿಕರು ಹಲವು ಬಾರಿ ಹೋರಾಟ ಮಾಡಿದ್ದರೂ ಯಾವುದೇ ಫಲ ಸಿಕ್ಕಿರುವುದಿಲ್ಲ. ಈ ವಿಷಯದ ಬಗ್ಗೆ ಕಾರ್ಮಿಕ ಸಚಿವರ ಗಮನ ಸೆಳೆಯಲು ಬಯಸುತ್ತೇನೆ.

**ಉತ್ತರ:-**

ಬೇರೆ ರಾಜ್ಯಗಳಿಂದ ಕೆಲಸಕ್ಕಾಗಿ ಬರುವ ವಲಸೆ ಕಾರ್ಮಿಕರನ್ನು ರಾಜ್ಯದಲ್ಲಿ ಕೆಲಸಕ್ಕೆ ನೇಮಿಸಿಕೊಳ್ಳುವ ಬಗ್ಗೆ ಮಾಲೀಕರನ್ನು ನಿರ್ಬಂಧಿಸಲು ಕಾನೂನಿನಲ್ಲಿ ಅವಕಾಶವಿರುವುದಿಲ್ಲ.

ವಲಸೆ ಕಾರ್ಮಿಕರನ್ನು ಒಳಗೊಂಡಂತೆ ಎಲ್ಲಾ ಕಾರ್ಮಿಕರಿಗೂ ಕನಿಷ್ಠ ವೇತನ ಕಾಯ್ದೆ 1948 ರಡಿ ಸರ್ಕಾರ ನಿಗದಿಪಡಿಸಿರುವ ವೇತನವನ್ನು ನೀಡಬೇಕಾಗುತ್ತದೆ. ಇದರಲ್ಲಿ ಯಾವುದೇ ತಾರತಮ್ಯವಿರುವುದಿಲ್ಲ. ಕನಿಷ್ಠ ವೇತನ ಪಾವತಿಸದಿದ್ದಲ್ಲಿ, ಸಂಬಂಧಪಟ್ಟ ಕಾರ್ಮಿಕರು ಅಥವಾ ಇಲಾಖೆಯ ನಿರೀಕ್ಷಕರ ಮೂಲಕ ಕನಿಷ್ಠ ವೇತನ ಕಾಯ್ದೆ 1948 ರಡಿ ನೇಮಕಗೊಂಡಿರುವ ಪ್ರಾಧಿಕಾರದ ಮುಂದೆ ಕ್ಲೈಮ್ ಅರ್ಜಿಯನ್ನು ಸಲ್ಲಿಸಿ ಪರಿಹಾರ ಪಡೆದುಕೊಳ್ಳಲು ಅವಕಾಶವಿರುತ್ತದೆ.

ವಲಸೆ ಕಾರ್ಮಿಕರನ್ನು ನೇಮಿಸಿಕೊಳ್ಳುವುದು ಆಯಾ ಸಂಸ್ಥೆಯ ಮಾಲೀಕರ ವಿವೇಚನೆಗೆ ಬಿಟ್ಟ ವಿಚಾರವಾಗಿರುತ್ತದೆ. ಸರ್ಕಾರ ಮಧ್ಯಪ್ರವೇಶಿಸಲು ಕಾನೂನಿನಲ್ಲಿ ಅವಕಾಶವಿರುವುದಿಲ್ಲ.

**ಕಾಇ 518 ಎಲ್‌ಇಟಿ 2025**

**(ಸಂತೋಷ್ ಎಸ್. ಲಾಡ್)**
**ಕಾರ್ಮಿಕ ಸಚಿವರು**